ಕರ್ನಾಟಕ ಸರ್ಕಾರ

**ಜುಲೈ 12, 2017**

# ಮಾಜಿ ಸಂಸದ ಜಿ ದೇವರಾಯ ನಾಯ್ಕ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

**ಬೆಂಗಳೂರು, ಜುಲೈ 12:**

ಮಾಜಿ ಸಂಸದ ಜಿ ದೇವರಾಯ ನಾಯ್ಕ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಕೆನರಾ ಲೋಕಸಭಾ ಕ್ಷೇತ್ರವನ್ನು 1980, 1984, 1989 ಹಾಗೂ 1991 ಹೀಗೆ ಸತತವಾಗಿ ನಾಲ್ಕು ಬಾರಿ ಪ್ರತಿನಿಧಿಸಿ ಕೆನರಾ ಲೋಕಸಭಾ ಕ್ಷೇತ್ರವನ್ನು ಕಾಂಗ್ರೆಸ್‌ನ ಭದ್ರ ಕೋಟೆಯನ್ನಾಗಿಸಿದ್ದ ದೇವರಾಯ ನಾಯ್ಕ ಅವರು ಕರಾವಳಿ ಭಾಗದಲ್ಲಿ ಜನಪ್ರಿಯ ಜನಪ್ರತಿನಿಧಿ ಎನಿಸಿದ್ದರು ಎಂದು ಸಿದ್ದರಾಮಯ್ಯ ಅವರು ಬಣ್ಣಿಸಿದ್ದಾರೆ.

ದೇವರಾಯ ನಾಯ್ಕ ಅವರ ಆತ್ಮಕ್ಕೆ ಶಾಂತಿ ಲಭಿಸಲಿ ಹಾಗೂ ಅವರ ಅಪಾರ ಬಂಧು-ಮಿತ್ರರಿಗೆ ಅವರ ಅಗಲಿಕೆಯನ್ನು ಭರಿಸುವ ಶಕ್ತಿಯನ್ನು ಕರುಣಿಸಲಿ ಎಂದು ಮುಖ್ಯಮಂತ್ರಿ ಭಗವಂತನಲ್ಲಿ ಪ್ರಾರ್ಥಿಸಿದ್ದಾರೆ.

***********

ಡಿ ಪಿ ಎಂ